ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 07/09/2020

# ಕಲಾಪ ಸಿದ್ಧತೆಗೆ ಇಂದು ಸಚಿವರ ಜತೆ ಸಿಎಂ ಸಭೆ

7-9-2020

## ಹೊಸ ಮಸೂದೆಗಳನ್ನು ಮಂಡಿಸಲು ಸೂಕ್ತ ತಯಾರಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು



ವಿಧಾನಮಂಡಲದ ಮುಂಗಾರು ಅಧಿವೇಶನಕ್ಕೆ ದಿನಾಂಕ ನಿಗದಿಯಾದ ಬೆನ್ನಲ್ಲೇ ಸದನದಲ್ಲಿ ಹೊಸ ವಿಧೇಯಕಗಳನ್ನು ಮಂಡಿಸುವ ಹಾಗೂ ಪ್ರತಿಪಕ್ಷಗಳನ್ನು ಎದುರಿಸುವ ಬಗೆಗಿನ ಸಿದ್ಧತೆ ಕುರಿತು ಚರ್ಚೆ ನಡೆಸಲು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಸಚಿವ ಸಂಪುಟ ಸಹೋದ್ಯೋಗಿಗಳ ಸಭೆ ಕರೆದಿದ್ದಾರೆ.

ಸೋಮವಾರ ಸಂಜೆ ಸಿಎಂ ಗೃಹ ಕಚೇರಿ ಕೃಷ್ಣಾದಲ್ಲಿ ಸಭೆ ನಡೆಯಲಿದೆ.

ಲಾಕ್‌ಡೌನ್ ಅವಧಿಯಲ್ಲಿ ಸರ್ಕಾರವು ಸುಗ್ರೀವಾಜ್ಞೆ ಮೂಲಕ ಮಾಡಿರುವ ತಿದ್ದುಪಡಿ ಕಾಯಿದೆಗಳು ಸದನದಲ್ಲಿ ಮರು ಮಂಡನೆಯಾಗಲಿವೆ. ಜತೆಗೆ ಹೊಸದಾಗಿ 8-10 ತಿದ್ದುಪಡಿ ವಿಧೇಯಕಗಳು ಸೇರಿ 30ಕ್ಕೂ ಹೆಚ್ಚು ವಿಧೇಯಕಗಳು ಮಂಡನೆಯಾಗಲಿವೆ. ಕೊರೋನಾ, ನೆರೆ ನಿರ್ವಹಣೆ, ಡ್ರಗ್ಸ್ ವಿಚಾರ ಸೇರಿದಂತೆ ಹಲವು ವಿಚಾರಗಳು ಚರ್ಚೆಗೆ ಬರುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಸದನದಲ್ಲಿ ಸರ್ಕಾರವನ್ನು ಯಾವ ರೀತಿ ಸಮರ್ಥನೆ ಮಾಡಿಕೊಳ್ಳಬೇಕು ಎನ್ನುವ ಕುರಿತು ಸಭೆಯಲ್ಲಿ ಸಮಾಲೋಚನೆ ನಡೆಸಲಾಗುತ್ತದೆ ಎಂದು ಮೂಲಗಳು ತಿಳಿಸಿವೆ.

ಸರ್ಕಾರ ರಚನೆಯಾಗಿ ಒಂದು ವರ್ಷ ಆಗಿರುವ ಕಾರಣ ಅಧಿವೇಶನ ಮಹತ್ವದ್ದಾಗಿದೆ. ಸಚಿವರು ತಮ್ಮ ಇಲಾಖೆಯ ಸಾಧನೆ ವಿವರಗಳೊಂದಿಗೆ ಪ್ರತಿಪಕ್ಷವನ್ನು ಎದುರಿಸಲು ಸಿದ್ಧರಾಗಬೇಕು. ಎಂಬುದು ಸೇರಿದಂತೆ ಹಲವು ಸೂಚನೆಗಳನ್ನು ಯಡಿಯೂರಪ್ಪ ನೀಡುವ ಸಾಧ್ಯತೆ ಇದೆ.